ವಿಜಯವಾಣಿ
ಕನ್ನಡಿಗರ ಧ್ವನಿ

Tuesday 04th April 2017

# ತಂತ್ರಜ್ಞಾನ ಬಳಕೆಗೆ ರಾಜ್ಯ ಮಾದರಿ



ಆರ್‌ವಿ ಕಾಲೇಜಿನಲ್ಲಿ ಇಂಟರ್‌ನೆಟ್ ಆಫ್ ಥಿಂಗ್ಸ್ ಕೌಶಲ ಕೇಂದ್ರ ಸ್ಥಾಪನೆ ಉದ್ಘಾಟನಾ ಕಾರ್ಯಕ್ರಮದಲ್ಲಿ ಐಟಿ-ಬಿಟಿ ಇಲಾಖೆ ಪ್ರಧಾನ ಕಾರ್ಯದರ್ಶಿ ಗೌರವ್ ಗುಪ್ತ ಪಾಲ್ಗೊಂಡಿದ್ದರು.

**ವಿಜಯವಾಣಿ ಸುದ್ದಿಜಾಲ** ಯಶವಂತಪುರ

ಆಧುನಿಕ ತಂತ್ರಜ್ಞಾನ ಬಳಸಿಕೊಳ್ಳುವ ಮೂಲಕ ಸಾರಿಗೆ, ಇಂಧನ, ಕೃಷಿ ವಲಯ ಸೇರಿ ವಿವಿಧ ಉದ್ಯಮಗಳಲ್ಲಿ ಇತರ ರಾಜ್ಯಗಳಿಗೆ ಕರ್ನಾಟಕ ಮಾದರಿಯಾಗಿದೆ ಎಂದು ಐಟಿ-ಬಿಟಿ ಇಲಾಖೆ ಪ್ರಧಾನ ಕಾರ್ಯದರ್ಶಿ ಗೌರವ್ ಗುಪ್ತ ಹೇಳಿದ್ದಾರೆ.

ಆರ್.ವಿ. ಇಂಜಿನಿಯರಿಂಗ್ ಕಾಲೇಜ್ ಮತ್ತು ಸಿಸ್ಕೊ ಸಂಸ್ಥೆ ಸಹಯೋಗದಲ್ಲಿ ಆರ್.ವಿ. ಕಾಲೇಜು ಆವರಣದಲ್ಲಿ ಇಂಟರ್‌ನೆಟ್ ಆಫ್ ಥಿಂಗ್ಸ್ ಕೌಶಲ ಕೇಂದ್ರ ಸ್ಥಾಪನೆಗೆ ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತನಾಡಿದರು. ಆಧುನಿಕತೆಗೆ ತಕ್ಕಂತೆ ತಂತ್ರಜ್ಞಾನ ಅಳವಡಿಸಿಕೊಂಡು ಕೌಶಲವೃದ್ಧಿ ಹೆಚ್ಚಿಸಿಕೊಳ್ಳಬೇಕು. ಇದರಿಂದ ಉತ್ತಮ ಉದ್ಯೋಗಾವಕಾಶ ದೊರಕುತ್ತವೆ ಎಂದರು.

ಸಿಸ್ಕೊ ಸಿಐಒ ಉಪಾಧ್ಯಕ್ಷ ವಿ.ಸಿ. ಗೋಪಾಲರತ್ನಂ, ಹೊಸತನ ಮತ್ತು ಉದ್ಯಮಶೀಲತೆ ವ್ಯವಸ್ಥೆ ರೂಪಿಸುವಲ್ಲಿ ನಗರ ಮಹತ್ವದ ಕೇಂದ್ರವಾಗಿದೆ. ಸೆಂಟರ್ ಆಫ್ ಎಕ್ಸಲೆನ್ಸ್ ಮೂಲಕ ವಿದ್ಯಾರ್ಥಿಗಳಿಗೆ ಮತ್ತು ವೃತ್ತಿಪರರಿಗೆ ಕೌಶಲ ವೃದ್ಧಿಗೆ ಒತ್ತು ನೀಡಿ ತಾಂತ್ರಿಕ ವೃತ್ತಿಪರತೆ ಹೊಂದುವವರಿಗೆ ಉತ್ತಮ ಅವಕಾಶ ಕಲ್ಪಿಸಲಿದೆ ಎಂದರು.

ರಾಷ್ಟ್ರೀಯ ಶಿಕ್ಷಣ ಸಮಿತಿ ಟ್ರಸ್ಟ್‌ನ ಅಧ್ಯಕ್ಷ ಡಾ.ಎಂ.ಕೆ. ಪಾಂಡುರಂಗ ಶೆಟ್ಟಿ, ರಾಷ್ಟ್ರೀಯ ಶಿಕ್ಷಣ ಸಮಿತಿ ಟ್ರಸ್ಟ್ ಗೌರವ ಕಾರ್ಯದರ್ಶಿ ಎವಿಎಸ್ ಮೂರ್ತಿ, ಪ್ರಾಂಶುಪಾಲ ಡಾ.ಕೆ. ಎನ್. ಸುಬ್ರಹ್ಮಣ್ಯ, ಪ್ರೊ.ರಾಜಾರಾವ್ ಮತ್ತಿತರರಿದ್ದರು.